# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 242 (208) |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 06-12-2023 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ತಾಲ್ಲೂಕುಗಳನ್ನು ಘೋಷಿಸಲಾಗಿದೆ; ಮತ್ತು ಅವು ಯಾವುದು; | 2018ನೇ ಸಾಲಿನಿಂದ ಇದುವರೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೆಳಕಂಡ ಹೊಸ ತಾಲ್ಲೂಕುಗಳು ರಚನೆಯಾಗಿವೆ.<br>1) ಕಡಬ 2) ಮೂಡಬಿದರೆ<br>3) ಮೂಲ್ಕಿ 4) ಉಳ್ಳಾಲ |
| ಆ) | ಹೊಸದಾಗಿ ಘೋಷಿಸಿದ ಎಲ್ಲಾ ತಾಲ್ಲೂಕುಗಳು ಅಧಿಕೃತವಾಗಿ ಕಾರ್ಯಾರಂಭ ಮಾಡಿವೆಯೇ; | ಹೊಸದಾಗಿ ಘೋಷಿಸಿದ 4 ತಾಲ್ಲೂಕುಗಳ ಅಧಿಸೂಚನೆಗಳು ರಾಜ್ಯಪತ್ರದಲ್ಲಿ ಪ್ರಕಟವಾಗುವ ಮೂಲಕ ಅಧಿಕೃತವಾಗಿ ಕಾರ್ಯಾರಂಭ ಮಾಡಿರುತ್ತವೆ. |
| ಇ) | ಅಧಿಕೃತವಾಗಿ ಕಾರ್ಯಾರಂಭ ಮಾಡಿದ್ದಲ್ಲಿ, ಸದರಿ ನೂತನ ತಾಲ್ಲೂಕುಗಳಿಗೆ ಅಗತ್ಯ ಕಛೇರಿಗಳು, ಸಿಬ್ಬಂದಿಗಳು ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಅತ್ಯವಶ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ; (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ತಹಸೀಲ್ದಾರ್ ಕಚೇರಿಯನ್ನು ಪ್ರಾರಂಭಿಸಲು ಅಗತ್ಯ ಸಂಖ್ಯೆಯ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.<br><br>ಇನ್ನುಳಿದ ಇಲಾಖೆಗಳ ತಾಲ್ಲೂಕು ಮಟ್ಟದ ಕಚೇರಿಗಳನ್ನು ಪ್ರಾರಂಭಿಸಲು ಅನುವಾಗುವಂತೆ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಅಗತ್ಯ ಸಂಖ್ಯೆಯ ಹುದ್ದೆಗಳನ್ನು ಮಂಜೂರು ಮಾಡಿ ಕಚೇರಿಗಳನ್ನು ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಲಾಗಿದೆ. |
| ಈ) | ನೂತನ ತಾಲ್ಲೂಕುಗಳಿಗೆ ತಾಲ್ಲೂಕು ಕೇಂದ್ರಗಳಲ್ಲಿ ಅತ್ಯವಶ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಇದುವರೆಗೆ ಎಷ್ಟು ಅನುದಾನವನ್ನು ಒದಗಿಸಲಾಗಿದೆ; ಕೈಗೊಂಡಿರುವ ಕಾಮಗಾರಿಗಳ ವಿವರಗಳೇನು? | ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 100 ಡಬ್ಲ್ಯೂಬಿಆರ್ 2017; ದಿನಾಂಕ:31.10.2017 ರಲ್ಲಿ ರಾಜ್ಯದಲ್ಲಿ ಹೊಸದಾಗಿ ತಾಲ್ಲೂಕು ಆಡಳಿತ ಸೌಧ ಕಟ್ಟಡಕ್ಕೆ ಬೇಕಾದ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಪೀಠೋಪಕರಣ, ಒಳಾಂಗಣ ವಿನ್ಯಾಸ, ವಿದ್ಯುಚ್ಛಕ್ತಿ ಸೌಲಭ್ಯ, ಶೌಚಾಲಯ, ಲಿಫ್ಟ್ ಅಳವಡಿಕೆ ಇನ್ನಿತರೆ ಎಲ್ಲಾ ಪೂರಕ ಸೌಲಭ್ಯಗಳನ್ನು ಒಳಗೊಂಡಂತೆ ರೂ.10.00 ಕೋಟಿಗಳ ಮಿತಿಯಲ್ಲಿ ನಿರ್ಮಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಅದರಂತೆ, ದಕ್ಷಿಣ ಕನ್ನಡ ಜಿಲ್ಲೆಯ ನೂತನ ತಾಲ್ಲೂಕುಗಳ 'ತಾಲ್ಲೂಕು ಆಡಳಿತ ಸೌಧ' ಕಟ್ಟಡ ನಿರ್ಮಾಣದ ಪ್ರಗತಿ ವಿವರಗಳು ಈ ಮುಂದಿನಂತಿದೆ:- |

**(ರೂ. ಲಕ್ಷಗಳಲ್ಲಿ)**

| ಕ್ರ. ಸಂ | ತಾಲ್ಲೂಕು ಆಡಳಿತ ಸೌಧ | ಆಡಳಿತಾತ್ಮಕ ಅನುಮೋದನೆ ನೀಡಿರುವ ವಿವರ | ಬಿಡುಗಡೆ ಮಾಡಲಾಗಿರುವ ಅನುದಾನ | ಷರಾ |
|---|---|---|---|---|
| 1 | ಮೂಡಬಿದ್ರೆ | ರೂ. 1000.00 | ರೂ. 1000.00 | ತಾಲ್ಲೂಕು ಆಡಳಿತ ಸೌಧ ಕಟ್ಟಡ ಕಾಮಾಗಾರಿಯು ಪೂರ್ಣಗೊಂಡಿದೆ. |
| 2 | ಕಡಬ | ರೂ. 1000.00 | ರೂ. 800.00 | ಸದರಿ ಕಟ್ಟಡ ಕಾಮಗಾರಿಯ 2ನೇ ಹಂತದ ಕಾಮಗಾರಿಗೆ ರೂ.800 ಲಕ್ಷಗಳ ಸವಿವರ ಅಂದಾಜು ಪಟ್ಟಿಯು ಸ್ವೀಕೃತವಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |
| 3 | ಮೂಲ್ಕಿ | ರೂ. 1000.00 | ರೂ. 150.00 | ಆರ್ಥಿಕ ಮತ್ತು ಭೌತಿಕ ಪ್ರಗತಿಯನುಸಾರ ಬಾಕಿ ಅನುದಾನವನ್ನು ನಿಯಮಾನುಸಾರ ಪರಿಶೀಲಿಸಿ ಬಿಡುಗಡೆ ಮಾಡಲಾಗುವುದು. |
| 4 | ಉಳ್ಳಾಲ | - | - | ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರಿಂದ ಉಳ್ಳಾಲ ತಾಲ್ಲೂಕಿನ ತಾಲ್ಲೂಕು ಆಡಳಿತ ಸೌಧ ಕಟ್ಟಡ ನಿರ್ಮಾಣ ರೂ.1500.00 ಲಕ್ಷಗಳ ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಪ್ರಸ್ತಾವನೆ ಸ್ವೀಕೃತವಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಕಂಇ 68 ಎಲ್ಆರ್‌ಡಿ 2023**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು